# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **526** |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16-09-2022 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಧಾನಮಂತ್ರಿ ಮಹತ್ವಾಕಾಂಕ್ಷಿಯ ಫಸಲ್ ಭೀಮಾ ಯೋಜನೆಯು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಕೈಗೊಂಡಿರುವ ಕ್ರಮಗಳೇನು; | ಪ್ರಧಾನಮಂತ್ರಿ ಮಹತ್ವಾಕಾಂಕ್ಷೆಯ ಫಸಲ್ ಬಿಮಾ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>ಮುಂಗಾರು ಹಂಗಾಮಿನಲ್ಲಿ ರಾಜ್ಯದ 31 ಜಿಲ್ಲೆಗಳಲ್ಲಿ ವಿಮಾ ಘಟಕವಾರು ವಿವಿಧ ಬೆಳೆಗಳನ್ನು ಬೆಳೆವಿಮೆ ನೋಂದಣಿಗಾಗಿ ಅಧಿಸೂಚಿಸಲಾಗಿದೆ. ಹಿಂಗಾರು ಹಂಗಾಮಿನಲ್ಲಿ ಬೆಳೆ ಆವರಿಸಿದ ವಿಸ್ತೀರ್ಣಕ್ಕನುಗುಣವಾಗಿ ಕೊಡಗು, ದಕ್ಷಿಣ ಕನ್ನಡ, ಬೆಂಗಳೂರು, ಬೆಂಗಳೂರು ಗ್ರಾಮಾಂತರ 04 ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ 27 ಜಿಲ್ಲೆಗಳಲ್ಲಿ ಹಾಗೂ ಬೇಸಿಗೆ ಹಂಗಾಮಿನಲ್ಲಿ ಉಡುಪಿ, ಕೊಡಗು, ಬೆಂಗಳೂರು, ಬೆಂಗಳೂರು ಗ್ರಾಮಾಂತರ ಮತ್ತು ಬೀದರ್ ಈ 05 ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ 26 ಜಿಲ್ಲೆಗಳಲ್ಲಿ ಬೆಳೆವಿಮೆ ನೋಂದಣಿಗಾಗಿ ಅಧಿಸೂಚಿಸಲಾಗಿದೆ. |
| ಆ) | ಹಾಗಿದ್ದಲ್ಲಿ ವಿಮೆಯನ್ನು ರಿಜಿಸ್ಟರ್ ಮಾಡುವ ಸಂದರ್ಭದಲ್ಲಿ ಆರ್.ಟಿ.ಸಿಯಲ್ಲಿ ವಿಮೆ ಮಾಡಲಾಗಿರುವ ಬೆಳೆಯನ್ನು ಸ್ಪಷ್ಟ ನಮೂದು ಮಾಡುವ ಅಗತ್ಯವಿದ್ದು, ಈ ಸಂದರ್ಭದಲ್ಲಿ ಯಾವುದೇ ಗೊಂದಲವಿಲ್ಲದಿರುವ ನಿಟ್ಟಿನಲ್ಲಿ ಆಗುವ ದೋಷಗಳನ್ನು ಸರಿಪಡಿಸಿ ರೈತಾಪಿ ಜನರಿಗೆ ಉಪಯೋಗವಾಗುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು) | ರೈತರು ಬೆಳೆ ವಿಮೆ ನೊಂದಾವಣೆಗಾಗಿ ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ/ ಖಾತೆ ಪುಸ್ತಕ ಒದಗಿಸುವುದು ಅವಶ್ಯಕವಿರುತ್ತದೆ. ವಿಮೆ ಮಾಡಲಾದ ಬೆಳೆಯನ್ನು ಬೆಳೆದಿರುವ ಬಗ್ಗೆ ಖಾತರಿಪಡಿಸಿಕೊಳ್ಳಲು ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ.<br><br>ಬೆಳೆ ಸಮೀಕ್ಷೆಯಲ್ಲಿ ಸಂಗ್ರಹಿಸಿದ ದತ್ತಾಂಶವನ್ನು ಸರ್ಕಾರದ ಪ್ರಮುಖ ಯೋಜನೆಗಳಾದ ಬೆಳೆ ವಿಮೆ, ಬೆಂಬಲ ಬೆಲೆ ಯೋಜನೆ, ಬೆಳೆ ಸಾಲ, ಬೆಳೆ ನಷ್ಟ ಪರಿಹಾರ ಹಾಗೂ ಇತರ DBT ಯೋಜನೆಗಳಲ್ಲಿ ಬಳಸಲಾಗುತ್ತಿಸರುವ ಹಿನ್ನೆಲೆಯಲ್ಲಿ ಸರ್ವೆ ನಂಬರ್‌ವಾರು ಬೆಳೆಯುವ ಬೆಳೆಗಳ ಮಾಹಿತಿಯನ್ನು ಸ್ಪಷ್ಟವಾಗಿ ಹಾಗೂ ನಿಖರವಾಗಿ ಅಕ್ಷಾಂಶ ಮತ್ತು ರೇಖಾಂಶ ವಿವರಗಳನ್ನೊಳಗೊಂಡಂತೆ ಮೊಬೈಲ್ ಆಪ್ ಮೂಲಕ |

| | | |
|---|---|---|
| | | ದಾಖಲಿಸಲು ವ್ಯವಸ್ಥೆ ಜಾರಿಯಲ್ಲಿರುತ್ತದೆ. ಮುಂದುವರೆದು, ಸಂಗ್ರಹಿಸಿದ ದತ್ತಾಂಶವನ್ನು ವಿವಿಧ ಹಂತಗಳಲ್ಲಿ ಸಂಬಂಧಪಟ್ಟ ಇಲಾಖೆಗಳ ಉಸ್ತುವಾರಿಯಲ್ಲಿ Reconciliation ಮತ್ತು validation ಆಗಿ ಅಂತಿಮಗೊಳಿಸಿದ ದತ್ತಾಂಶವನ್ನು ಭೂಮಿ ಕೋಶಕ್ಕೆ ಬೆಳೆ ಸಮೀಕ್ಷೆ ಮುಗಿದ 1 ರಿಂದ 2 ತಿಂಗಳೊಳಗೆ ರವಾನಿಸಿ ನಂತರ ಪಹಣಿಗಳಲ್ಲಿ ಬೆಳೆ ವಿವರಗಳನ್ನು ಇಂದೀಕರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಈ ರೀತಿ ಇಂದೀಕರಿಸುವ ಪೂರ್ವದಲ್ಲಿ ಸಂಗ್ರಹಿಸಿದ ದತ್ತಾಂಶವನ್ನು ಪರಿಶೀಲಿಸಿ ಅನುಮೋದಿಸಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಮೇಲ್ವಿಚಾರಕರನ್ನಾಗಿ ನೇಮಿಸಿದ್ದು, ಅನುಮೋದಿಸಿದ ಹಾಗೂ ಸಂಗ್ರಹಿಸಿದ ದತ್ತಾಂಶದಲ್ಲಿ ಏನಾದರೂ ವ್ಯತ್ಯಾಸಗಳಿದ್ದಲ್ಲಿ 'ರೈತ ಸ್ನೇಹಿ ಬೆಳೆ ದರ್ಶಕ್ ಆಪ್' ಮೂಲಕ ಆಕ್ಷೇಪಣೆಗಳನ್ನು ಸಲ್ಲಿಸಲು ರೈತರಿಗೆ ಅವಕಾಶ ಕಲ್ಪಿಸಲಾಗಿರುತ್ತದೆ.<br><br>ರೈತರು ತಮ್ಮ ಜಮೀನಿನ ಬೆಳೆ ಸಮೀಕ್ಷೆಯ ಮಾಹಿತಿ ಪಡೆಯಲು ಹಾಗೂ ಸಮೀಕ್ಷೆಯ ಬಗ್ಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡುವ ಉದ್ದೇಶದಿಂದ ಬೆಳೆ ದರ್ಶಕ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ. ಬೆಳೆ ಸಮೀಕ್ಷೆ ಬಗ್ಗೆ ರೈತರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಇಲಾಖಾ ಅಧಿಕಾರಿಗಳಿಂದ ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ. |

*ಕೃ ಇ 64 ಕೃಉಇ 2022*

(ಬಿ.ಸಿ.ಪಾಟೀಲ್)
ಕೃಷಿ ಸಚಿವರು